**Akashvani : Bangalore**
**Regional Bulletin In Kannada**
**16.06.2026 / 14.30 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**16.06.2026 / 14.30 hrs**

ಮುಖ್ಯಾಂಶಗಳು

**೧. ವೈದ್ಯಕೀಯ ವೃತ್ತಿಯಲ್ಲಿ ನಂಬಿಕೆಯೇ ಅತಿ ದೊಡ್ಡ ಆಸ್ತಿ- ರಾಜೀವ್ ಗಾಂಧಿ ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಭಿಮತ**

**೨. ಕೆಮ್ಮಿನ ಸಿರಪ್ ಖರೀದಿಗೂ ವೈದ್ಯರ ಶಿಫಾರಸ್ಸು ಅಗತ್ಯ; ಮಾರಾಟಕ್ಕೆ ನೀಡಿದ್ದ ವಿನಾಯಿತಿ ಹಿಂತೆಗೆದುಕೊಂಡ ಕೇಂದ್ರ ಸರ್ಕಾರ**

**೩. ಮೈಸೂರಿನಲ್ಲಿ ಬೆಂಕಿ ಅವಘಡ; ಅಬಕಾರಿ ಡಿಸಿ ಅಮಾನತಿಗೆ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಸೂಚನೆ**

**೪. ಅನುಷ್ಠಾನ ಹಂತದಲ್ಲಿರುವ ಅತ್ಯಧಿಕ ಪವನ ವಿದ್ಯುತ್ ಸಾಮರ್ಥ್ಯಕ್ಕಾಗಿ ರಾಷ್ಟ್ರೀಯ ಪ್ರಶಸ್ತಿ**

**೫. ಮೇಕೆದಾಟು ಯೋಜನೆ ಖಂಡಿಸಿ, ಇದೇ ೨೩ ರಂದು ನವದೆಹಲಿಯಲ್ಲಿ ಪ್ರತಿಭಟನೆಗೆ ತಮಿಳುನಾಡು ರೈತರ ನಿರ್ಧಾರ**

**<><*<><>*><>**

ವೈದ್ಯಕೀಯ ವೃತ್ತಿ ಕೇವಲ ಉದ್ಯೋಗವಲ್ಲ, ಅದು ಸೇವೆ ಮತ್ತು ಕರುಣೆಯ ಕ್ಷೇತ್ರವಾಗಿದ್ದು, ವೈದ್ಯರು ಸದಾ ನೈತಿಕತೆ, ಪ್ರಾಮಾಣಿಕತೆ ಹಾಗೂ ಮಾನವೀಯ ಮೌಲ್ಯಗಳಿಗೆ ಬದ್ಧರಾಗಿರಬೇಕು ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನ ಜಿಕೆವಿಕೆಯಲ್ಲಿ ನಡೆದ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ೨೮ನೇ ವಾರ್ಷಿಕ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವೈದ್ಯಕೀಯ ವೃತ್ತಿಯಲ್ಲಿ ನಂಬಿಕೆಯೇ ಅತಿದೊಡ್ಡ ಆಸ್ತಿ ಎಂದು ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ "ಆರೋಗ್ಯಕರ ಭಾರತ" ಮತ್ತು "ವಿಕಸಿತ ಭಾರತ-೨೦೪೭" ಪರಿಕಲ್ಪನೆಯನ್ನು ಸಾಕಾರಗೊಳಿಸುವಲ್ಲಿ ವೈದ್ಯಕೀಯ ಸಮುದಾಯದ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದ್ದಾರೆ. ಸಮಾರಂಭದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿದರು. ಇದೇ ವೇಳೆ ಮಾತನಾಡಿದ ಅವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕಾರ್ಯವೈಖರಿಗೆ ಪ್ರಶಂಸೆ ವ್ಯಕ್ತಪಡಿಸಿದರು. ಯುವ ವೈದ್ಯರು ಗ್ರಾಮೀಣ ಪ್ರದೇಶದಲ್ಲೂ ಆರೋಗ್ಯ ಸೇವೆ ಒದಗಿಸುವತ್ತ ಗಮನಹರಿಸಬೇಕು ಎಂದು ಕರೆ ನೀಡಿದರು. ಸಮಾರಂಭದಲ್ಲಿ ವೈದ್ಯಕೀಯ ಶಿಕ್ಷಣ ಸಚಿವರಾದ ಡಾ.ಶರಣಪ್ರಕಾಶ ಆರ್. ಪಾಟೀಲ್, ವಿಶ್ವವಿದ್ಯಾಲಯದ ಕುಲಪತಿ ಡಾ. ಭಗವಾನ್ ಬಿ.ಸಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

**<><*<><>*><>**

ಕೇಂದ್ರ ಆರೋಗ್ಯ ಇಲಾಖೆ, ೧೯೪೫ರ ಔಷಧ ನಿಯಮಗಳಿಗೆ ತಿದ್ದುಪಡಿ ಮಾಡಿ ಅಧಿಸೂಚನೆ ಹೊರಡಿಸಿದೆ. ಸಣ್ಣಪುಟ್ಟ ಹಳ್ಳಿಗಳಲ್ಲಿ ಕೆಮ್ಮಿನ ಸಿರಪ್‌ಗಳ ಮಾರಾಟಕ್ಕೆ ನೀಡಲಾದ ವಿನಾಯಿತಿಯನ್ನು ಹಿಂತೆಗೆದುಕೊಂಡಿದೆ. ಔಷಧ ನಿಯಮಗಳ 'ಕೆ' ವೇಳಾಪಟ್ಟಿಯಿಂದ ಔಷಧಗಳ ವರ್ಗ ಶೀರ್ಷಿಕೆಯಲ್ಲಿದ್ದ ಸಿರಪ್ ಎಂಬ ಪದವನ್ನು ಕೈಬಿಡಲಾಗಿದೆ ಎಂದು ತಿಳಿಸಲಾಗಿದೆ. ಈ ಪದವನ್ನು ತೆಗೆದುಹಾಕಿರುವುದರಿಂದ ಕೆಮ್ಮಿನ ಸಿರಪ್‌ಗಳಿಗೆ ಈವರೆಗೆ ನೀಡಲಾಗುತ್ತಿದ್ದ ವಿನಾಯಿತ ಇನ್ನುಮುಂದೆ ಅನ್ವಯವಾಗುವುದಿಲ್ಲ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ. ಹೀಗಾಗಿ ಸಾರ್ವಜನಿಕರು ಮೆಡಿಕಲ್ ಶಾಪ್‌ಗಳಲ್ಲಿ ವೈದ್ಯರ ಚೀಟಿ ಇಲ್ಲದೆ, ಕೆಮ್ಮಿನ ಸಿರಪ್ ಖರೀದಿ ಮಾಡುವಂತಿಲ್ಲ.

ಕೆಮ್ಮಿನ ಸಿರಪ್‌ಗೂ ವೈದ್ಯರ ಶಿಫಾರಸ್ಸು ಅಗತ್ಯ ಎಂದು ಕೇಂದ್ರ ಸರ್ಕಾರ ಸೂಚನೆ ನೀಡಿದೆ. ಈ ಹಿಂದೆ ಒಂದು ಸಾವಿರಕ್ಕಿಂತ ಕಡಿಮೆ ಜನಸಂಖ್ಯೆ ಇರುವ ಹಳ್ಳಿಗಳಲ್ಲಿ ಕೆಮ್ಮಿನ ಸಿರಪ್‌ಗಳ ಮಾರಾಟಕ್ಕೆ ಅವಕಾಶ ನೀಡಲಾಗಿತ್ತು.

**<><*<><>*><>**

ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಇಂದು ಮೈಸೂರಿನ ಕೆಆರ್ ಆಸ್ಪತ್ರೆ ಶವಾಗಾರಕ್ಕೆ ಭೇಟಿ ನೀಡಿದರು. ಈ ವೇಳೆ, ನಿನ್ನೆ ಪಬ್‌ನಲ್ಲಿ ಸಂಭವಿಸಿದ ಬೆಂಕಿ ಅವಘಡದಲ್ಲಿ ಸಾವನ್ನಪ್ಪಿದವರ ಕುಟುಂಬಸ್ಥರಿಗೆ ಸಾಂತ್ವಾನ ಹೇಳಿ, ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಇದಕ್ಕೂ ಮೊದಲು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ, ಘಟನೆ ಹಿನ್ನೆಲೆಯಲ್ಲಿ ಅಬಕಾರಿ ಡಿಸಿ ಅಮಾನತಿಗೆ ಶಿಫಾರಸ್ಸು ಮಾಡಲಾಗಿದ್ದು, ಪಬ್ ಮಾಲೀಕನ ವಿರುದ್ಧ ದೂರು ದಾಖಲಿಸಲಾಗಿದೆ ಎಂದು ತಿಳಿಸಿದ್ದಾರೆ. ಯಾವುದೇ ಪರವಾನಿಗೆ ಇಲ್ಲದೆ, ಪಬ್ ನಡೆಸಲಾಗುತ್ತಿದ್ದು, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದ್ದಾರೆ. ಮೈಸೂರಿನ ಎಲ್ಲಾ ವಾಣಿಜ್ಯ ಕಟ್ಟಡಗಳಲ್ಲಿ ಬೆಂಕಿ ಅವಘಡದ ಬಗ್ಗೆ ಮುಂಜಾಗ್ರತೆ ಕ್ರಮ ತೆಗೆದುಕೊಂಡಿರುವ ಕುರಿತು ಪರಿಶೀಲನೆ ನಡೆಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

**<><*<><>*><>**

ವಿಧಾನಪರಿಷತ್‌ನ ಏಳು ಸ್ಥಾನಗಳಿಗೆ ಇದೇ ೧೮ ರಂದು ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಬಿಡದಿಯ ಖಾಸಗಿ ರೆಸಾರ್ಟ್‌ನಲ್ಲಿ ಇಂದು ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದ್ದು, ಎಲ್ಲಾ ಶಾಸಕರು ಕಡ್ಡಾಯವಾಗಿ ಹಾಜರಾಗುವಂತೆ ಸೂಚನೆ ನೀಡಲಾಗಿದೆ. ಸಂಜೆ ೬.೩೦ ಕ್ಕೆ ಸಭೆ ನಡೆಯಲಿದ್ದು, ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್, ಶಾಸಕರು ಹಾಗೂ ಪರಿಷತ್ ಸದಸ್ಯರು ಭಾಗವಹಿಸಲಿದ್ದಾರೆ.

**<><*<><>*><>**

ಅನುಷ್ಠಾನದ ಹಂತದಲ್ಲಿರುವ ಅತ್ಯಧಿಕ ಪವನ ವಿದ್ಯುತ್ ಸಾಮರ್ಥ್ಯ'ಕ್ಕಾಗಿ ರಾಷ್ಟ್ರೀಯ ಮಟ್ಟದ ಪ್ರಶಸ್ತಿಯನ್ನು ಕರ್ನಾಟಕ ಪಡೆದುಕೊಂಡಿದೆ. ಗೋವಾದಲ್ಲಿ ನಡೆದ ೨೦೨೬ನೇ ಸಾಲಿನ ವಿಶ್ವ ಪವನ ದಿನಾಚರಣೆಯಲ್ಲಿ ರಾಜ್ಯಕ್ಕೆ ಪ್ರತಿಷ್ಠಿತ "ಹೈಯೆಸ್ಟ್ ವಿಂಡ್ ಕ್ಯಾಪಾಸಿಟಿ ಪೈಪ್‌ಲೈನ್" ಪ್ರಶಸ್ತಿ ಸಂದಿದೆ.ಕೇಂದ್ರದ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್  ಜೋಶಿ ಅವರಿಂದ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕ ಕೆ.ಪಿ.ರುದ್ರಪ್ಪಯ್ಯ ಈ ಪ್ರಶಸ್ತಿ ಸ್ವೀಕರಿಸಿದ್ದಾರೆ. ೯ ಗಿಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳು ಅನುಷ್ಠಾನ ಹಂತದಲ್ಲಿವೆ. ಈ ಪ್ರಶಸ್ತಿಯೊಂದಿಗೆ ಪವನ ಶಕ್ತಿಯ ಉತ್ಪಾದನೆಯನ್ನು ಹೆಚ್ಚಿಸುವ ಮೂಲಕ ನವೀಕರಿಸಬಹುದಾದ ಇಂಧನ ಪರಿವರ್ತನೆಯನ್ನು ಬಲಪಡಿಸುವಲ್ಲಿ ರಾಜ್ಯ ನಾಯಕತ್ವ ಹಾಗೂ ಬದ್ಧತೆಯನ್ನು ಸಾಬೀತುಪಡಿಸಿದೆ.

**<><*<><>*><>**

ಆದಾಯ ಮೀರಿ ಆಸ್ತಿ ಗಳಿಕೆಗೆ ಸಂಬಂಧಿಸಿದಂತೆ ದಾವಣಗೆರೆಯಲ್ಲಿ ಮೂವರು ಪ್ರಮುಖ ಅಧಿಕಾರಿಗಳಿಗೆ ಸೇರಿದ ೧೨ಕ್ಕೂ ಹೆಚ್ಚು ಸ್ಥಳಗಳ ಮೇಲೆ ಲೋಕಾಯುಕ್ತ ಪೊಲೀಸರು ಇಂದು ದಾಳಿ ನಡೆಸಿದ್ದಾರೆ. ದಾವಣಗೆರೆ ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಎಂ.ಎಸ್.ಕೌಲಾಪುರೆ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆದಿದೆ. ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಮುಖ್ಯ ತಾಂತ್ರಿಕ ಅಧಿಕಾರಿ ಸಿದ್ದೇಶ್ವರ ಎನ್.ಹೆಬ್ಬಾಳ, ಬಯಲುಸೀಮೆ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ಕೃಷ್ಣ ನಾಯ್ಕ ಹಾಗೂ ಬೆಳಗಾವಿಯ ಕೆಆರ್‌ಐಡಿಎಲ್ ಅಧೀಕ್ಷಕ ಎಂಜಿನಿಯರ್ ಸಣ್ಣ ಕೆಂಚಪ್ಪ ದಾಳಿಗೆ ಒಳಗಾದ ಅಧಿಕಾರಿಗಳಾಗಿದ್ದಾರೆ.  ಇನ್ನೊಂದೆಡೆ ಬಯಲು ಸೀಮೆ

ಪ್ರಾಧಿಕಾರದ ಕಾರ್ಯದರ್ಶಿ ಕೃಷ್ಣನಾಯ್ಕ್ ಅವರ ಮನೆ ಹಾಗೂ ಚಿತ್ರದುರ್ಗ ನಗರದ ಕಚೇರಿ ಮೇಲೆ ದಾಳಿ ನಡೆಸಿದ್ದು, ಲೋಕಾಯುಕ್ತ ಅಧಿಕಾರಿಗಳಿಂದ ದಾಖಲೆಗಳ ಪರಿಶೀಲನೆ ಮುಂದುವರಿದಿದೆ.

<><*<><>*><>

ರಾಜ್ಯದ ಮೇಕೆದಾಟು ಯೋಜನೆ ತಿರಸ್ಕರಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿ, ಇದೇ ೨೩ ರಂದು ತಮಿಳುನಾಡು ರೈತರು ಪ್ರತಿಭಟನೆ ನಡೆಸಲು ನಿರ್ಧರಿಸಿದ್ದಾರೆ. ತಿರುವಾರೂರಿನಲ್ಲಿ ನಡೆದ ತಮಿಳುನಾಡು ಕಾವೇರಿ ರೈತ ಸಂಘದ ರಾಜ್ಯ ಸಮಿತಿಯ ಸಭೆಯ ಬಳಿಕ ಬಿಡುಗಡೆ ಮಾಡಿರುವ ಹೇಳಿಕೆಯಲ್ಲಿ ಯೋಜನೆ ಖಂಡಿಸಿ, ತಮಿಳುನಾಡು ರೈತರು ದೆಹಲಿಯಲ್ಲಿನ ಕೇಂದ್ರ ಜಲಸಂಪನ್ಮೂಲ ಇಲಾಖೆಯ ಪ್ರಧಾನ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಘೋಷಣೆ ಮಾಡಿದ್ದಾರೆ. ಕಾವೇರಿ ನದಿಗೆ ನಿರ್ಮಿಸಲು ಉದ್ದೇಶಿಸಿರುವ ಪ್ರಸ್ತಾವಿತ ಜಲಾಶಯವು, ತಮಿಳುನಾಡಿನಲ್ಲಿ ನೀರಿನ ಲಭ್ಯತೆಯ ಮೇಲೆ ಪ್ರತಿಕೂಲ ಪರಿಣಾಮ ಬೀರಬಹುದು ಹಾಗೂ ಕಾವೇರಿ ಜಲಾನಯನ ಪ್ರದೇಶದ ಕೃಷಿಗೆ ಗಂಭೀರ ಅಪಾಯವನ್ನುಂಟು ಮಾಡಬಹುದು ಎಂದು ಸಂಘ ಕಳವಳ ವ್ಯಕ್ತಪಡಿಸಿದೆ.

<><*<><>*><>

ಸಾರ್ವಜನಿಕರ ಅಹವಾಲುಗಳನ್ನು ನಿಗದಿತ ಅವಧಿಯೊಳಗೆ ಶೀಘ್ರವೇ ವಿಲೇವಾರಿ ಮಾಡಿ, ಜನಸಾಮಾನ್ಯರ ಸಮಸ್ಯೆಗಳ ಪರಿಹಾರಕ್ಕೆ ಆದ್ಯತೆ ನೀಡಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ರಾಹುಲ್ ತುಕಾರಾಂ ಪಾಂಡ್ವೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮುಂಗಾರು ಹಂಗಾಮಿನಲ್ಲಿ ಮಳೆ ಕೊರತೆಯ ಸಾಧ್ಯತೆಯನ್ನು ಗಮನದಲ್ಲಿಟ್ಟುಕೊಂಡು ಕುಡಿಯುವ ನೀರಿನ ನಿರ್ವಹಣೆಗೆ ಸಂಬಂಧಿಸಿದ ತುರ್ತು ಕ್ರಿಯಾಯೋಜನೆಯನ್ನು ೧೫ ದಿನಗಳೊಳಗೆ ಸಲ್ಲಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಭೂ-ಗ್ಯಾರಂಟಿ ಅಭಿಯಾನದಡಿ ಬಿ-ಖಾತೆಯಿಂದ ಎ-ಖಾತೆಗೆ ಪರಿವರ್ತನೆ, ಸರ್ಕಾರಿ ಜಮೀನುಗಳ ಒತ್ತುವರಿ ತೆರವು, ಆರ್‌ಟಿಸಿ ಸಂಬಂಧಿತ ಬಾಕಿ ಅರ್ಜಿಗಳ ವಿಲೇವಾರಿ ಸೇರಿದಂತೆ ಭೂ ದಾಖಲೆಗಳ ಸುಧಾರಣೆಗೆ ತ್ವರಿತ ಕ್ರಮ ಕೈಗೊಳ್ಳುವಂತೆ ಅವರು ತಿಳಿಸಿದ್ದಾರೆ.

<><*<><>*><>

ಅಪ್ರಾಪ್ತ ಬಾಲಕಿ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗೆ ಕೋಲಾರದ ವಿಶೇಷ ಪೋಕ್ಸೋ ನ್ಯಾಯಾಲಯ ೨೦ ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ಹಾಗೂ ೪೦ ಸಾವಿರ ರೂಪಾಯಿ ದಂಡ ವಿಧಿಸಿ ತೀರ್ಪು ನೀಡಿದೆ. ೨೦೨೪ರ ಫೆಬ್ರವರಿ ೭ರಂದು ಕೋಲಾರ ಮಹಿಳಾ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ದೂರಿನ ಮೇರೆಗೆ ಪೋಕ್ಸೋ ಕಾಯ್ದೆ ಕಲಂ ೬ ಹಾಗೂ ಬಾಲ್ಯ ವಿವಾಹ ನಿಷೇಧ ಕಾಯ್ದೆ ಕಲಂ ೯ ರಡಿಯಲ್ಲಿ ಪ್ರಕರಣ ದಾಖಲಿಸಲಾಗಿತ್ತು. ಪ್ರಕರಣದ ವಿಚಾರಣೆ ನಡೆಸಿದ ಕೋಲಾರದ ವಿಶೇಷ ತ್ವರಿತ ನ್ಯಾಯಾಲಯದ ನ್ಯಾಯಾಧೀಶರಾದ ಪ್ರಸಾದ್ ಕೆ.ಬಿ. ಅವರು ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಈ ತೀರ್ಪು ಪ್ರಕಟಿಸಿದ್ದಾರೆ. ಸಂತ್ರಸ್ತ ಬಾಲಕಿಗೆ ಸರ್ಕಾರದಿಂದ ೪ ಲಕ್ಷ ರೂಪಾಯಿ ಪರಿಹಾರ ನೀಡುವಂತೆ ನ್ಯಾಯಾಲಯ ಆದೇಶಿಸಿದೆ.

<><*<><>*><>

ಕರ್ನಾಟಕ ಮಾಧ್ಯಮ ಅಕಾಡೆಮಿಯು, ಸುದ್ದಿ ಛಾಯಾಚಿತ್ರಗ್ರಾಹಕರಿಗಾಗಿ “ಈಂಛಿus ೦ಟಿ ೦eತಿs” ಎಂಬ ರಾಷ್ಟ್ರಮಟ್ಟದ ಪತ್ರಿಕಾ ಛಾಯಾಚಿತ್ರ ಸ್ಪರ್ಧೆ ಏರ್ಪಡಿಸಿದೆ. ಈ ಸ್ಪರ್ಧೆಯಲ್ಲಿ ಆಯ್ಕೆಯಾಗುವ ಮೊದಲ ಮೂರು ಛಾಯಾಚಿತ್ರಗಳಿಗೆ ಕ್ರಮವಾಗಿ ೩೫ ಸಾವಿರ, ೨೫ ಸಾವಿರ, ಹಾಗೂ ೧೫ ಸಾವಿರ ರೂಪಾಯಿ ನಗದು ಬಹುಮಾನ ನೀಡಲು ನಿರ್ಧರಿಸಲಾಗಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>